**<u>ಹೆಚ್ಚುವರಿ ಸಿವಿಲ್ ಜಡ್ಜ ಮತ್ತು ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಭಟ್ಕಳ.</u>**

**<u>ಸಿ. ಸಿ. ನಂಬರಃ 128/2025</u>**

**ಫಿರ್ಯಾದುದಾರರು** ದಿ. ಜನತಾ ಕೋ-ಅಪರೇಟಿವ್ ಕ್ರೆಡಿಟ್ ಸೊಸೈಟಿ, ಲಿಮಿಟೆಡ್,
ಭಟ್ಕಳ , ಕಾರ್ ಸ್ಟ್ರೀಟ್, ಶಾಖೆ, ಭಟ್ಕಳ ತಾಲೂಕು.
ಪ್ರತಿನಿಧಿಸುವವರು, ಇದರ ವ್ಯವಸ್ಥಾಪಕರು,
ಶ್ರೀ ವಿನೋದ ತಂದೆಃ ಮಂಜುನಾಥ ನಾಯ್ಕ,

**- ವಿರುದ್ಧ -**

**ಆರೋಪಿತರು** ಶ್ರೀ ಶಂಕರ ತಿಮ್ಮಪ್ಪ ನಾಯ್ಕ
ವಯಸ್ಸುಃ 40 ವರ್ಷ
ಸಾಃ ಶರಬಿಮನೆ, ಮದ್ದಾಗ್ಗರಕೇರಿ, ಬೆಳಕೆ,
ಭಟ್ಕಳ ತಾಲೂಕು.

**<u>ಆಪಾದನೆ</u>**

ಆರೋಪಿಯಾದ ನೀವು ದಿನಾಂಕಃ 10-05-2022 ರಂದು ಪಿರ್ಯಾದಿ ಸಂಸ್ಥೆಯಿಂದ ರೂ.1,00,000/- (ರೂಪಾಯಿ ಒಂದು ಲಕ್ಷ ಮಾತ್ರ) ಹಣವನ್ನು ಕ್ಯಾಶ್ ಕ್ರೆಡಿಟ್ ಸಾಲವಾಗಿ ಸಾಲದ ಖಾತೆ ಸಂಖ್ಯೆ CC-1357 ರಲ್ಲಿ ಶೇಕಡಾ 15% ವಾರ್ಷಿಕ ಬಡ್ಡಿ ದರದಲ್ಲಿ ಪಡೆದುಕೊಂಡಿದ್ದು ಇರುತ್ತದೆ. ಆದರೆ ಒಪ್ಪಿಕೊಂಡಂತೆ ಸದ್ರಿ ಸಾಲವನ್ನು ಅವಧಿಯೊಳಗೆ ಮಾಡಿದ್ದು ಇರುವುದಿಲ್ಲ. ದಿನಾಂಕಃ 15-10-2024 ರ ತನಕ ಅಸಲು ಬಡ್ಡಿ ಸೇರಿ ಒಟ್ಟೂ ರೂ. 1,25,500/-( ಒಂದು ಲಕ್ಷದ ಇಪ್ಪತ್ತೈದು ಸಾವಿರ ಐದುನೂರು ಮಾತ್ರ) ಬಾಕಿ ಇರುತ್ತದೆ. ನಂತರ ಸದ್ರಿ ಸಾಲದ ಹಣವನ್ನು ಪಿರ್ಯಾದಿಯವರು ಮರುಪಾವತಿ ಮಾಡುವಂತೆ ಕೇಳಿಕೊಂಡಾಗ ಮರುಪಾವತಿ ಮಾಡುವ ಸಲುವಾಗಿ ನೀವು ಫೆಡರಲ್ ಬ್ಯಾಂಕ್ ಲಿಮಿಟೆಡ್, ಭಟ್ಕಳ ಶಾಖೆಯ ಚೆಕ್ ನಂಬರ್ 0736271 ನ್ನು 1,25,500/-( ಒಂದು ಲಕ್ಷದ ಇಪ್ಪತ್ತೈದು ಸಾವಿರ ಐದುನೂರು ಮಾತ್ರ) ಕ್ಕೆ ದಿನಾಂಕಃ 15-10-2024 ಎಂದು ನಮೂದಿಸಿ ಚೆಕ್ ನ್ನು ಫಿರ್ಯಾದಿದಾರರಿಗೆ ನೀಡಿರುತ್ತೀರಿ, ಸದ್ರಿ ಚೆಕ್ಕನ್ನು ಫಿರ್ಯಾದಿ ಸೊಸೈಟಿಯವರು ದಿ.ಭಟ್ಕಳ ಅರ್ಬನ್ ಕೋ-ಅಪರೇಟಿವ್ ಲಿಮಿಟೆಡ್, ಭಟ್ಕಳ ಶಾಖೆಯಲ್ಲಿ ನಗದೀಕರಣಕ್ಕಾಗಿ ಹಾಜರಪಡಿಸಿದಾಗ,"Funds Insufficient" ಎಂಬ ಹಿಂಬರಹದೊಂದಿಗೆ ದಿನಾಂಕಃ 18-10-2024 ರಂದು ವಾಪಸ್ಸು ಬಂದಿರುತ್ತದೆ.

ನಂತರ ಫಿರ್ಯಾದಿದಾರರು ದಿನಾಂಕಃ 09-11-2024 ರಂದು ತಮ್ಮ ವಕೀಲರ ಮೂಲಕ ಲೀಗಲ್ ನೋಟಿಸನ್ನು ರಿಜಿಸ್ಟರ್ ಅಂಚೆ ಮುಖಾಂತರ ನಿಮಗೆ ಕಳುಹಿಸಿದ್ದು, ಸದ್ರಿ ಚೆಕ್ಕಿನಲ್ಲಿ ನಮೂದಿಸಿರುವ ಹಣವನ್ನು ನೋಟಿಸು ತಲುಪಿದ 15 ದಿನಗಳೊಳಗೆ ಮರು ಮಾಡುವಂತೆ ತಿಳಿಸಿದ್ದು, ಸದ್ರಿ ನೋಟಿಸ್ಸನ್ನು ನೀವು ಸ್ವೀಕರಿಸದೇ ದಿನಾಂಕಃ 19-11-2024 ರಂದು Unclaimed ಎಂದು ವಾಪಸ್ಸು ಬಂದಿರುತ್ತದೆ. ಆದರೆ ಇಂದಿನವರೆಗೂ ನೀವು ಚೆಕ್ಕಿನ ಹಣವನ್ನು ಪಾವತಿ ಮಾಡದೆ ಆ ಮೂಲಕ ನೆಗೋಶಿಯೇಬಲ್ ಇನ್‌ಸ್ಟ್ರುಮೆಂಟ ಆಕ್ಟ ಕಲಂ 138 ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವೆಸಗಿದ್ದೀರಿ ಎಂದು ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಪ್ರಶ್ನೆ - ನಿಮ್ಮ ಮೇಲೆ ಹೊರಿಸಲಾದ ಆಪಾದನೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರ - ಹೌದು

ಪ್ರಶ್ನೆ - ನೀವು ಸದ್ರಿ ಆಪಾದನೆಯನ್ನು ಒಪ್ಪಿಕೊಳ್ಳುತ್ತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರ - ಇಲ್ಲ. ವಿಚಾರಣೆಯಾಗಬೇಕು .

(ಮೇಲಿನ ಆಪಾದನೆಯನ್ನು ಆಪಾದಿತನಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಯಥಾರೀತಿ ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.

ಸಹಿ ಇದೆ/-

**(ಶ್ರೀಮತಿ.ಧನವತಿ)**

ಹೆಚ್ಚುವರಿ ಸಿವಿಲ್ ಜಡ್ಜ ಮತ್ತು

ದಿನಾಂಕಃ 15-07-2025. ನ್ಯಾಯಿಕ ದಂಡಾಧಿಕಾರಿ, ಭಟ್ಕಳ.